**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**

**ಸಿಸಿ ನಂ.640/2023**

**ಫಿರ್ಯಾದುದಾರರುಃ** ಶ್ರೀ. ವೇಣುಗೋಪಾಲ.ಬಿ. ಬಿನ್ ಬಸವೇಗೌಡ, 40 ವರ್ಷ, ವಾಸಃ ತಟ್ಟೆಕೆರೆ ಗ್ರಾಮ, ಹನಗೋಡು ಹೋಬಳಿ, ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.

**– ವಿರುದ್ಧ –**

**ಆರೋಪಿಃ** ಶ್ರೀ.ಸಂತೋಷ.ಎನ್.ಜಿ., ಬಿನ್ ಗಂಗಾಧರ, 25ವರ್ಷ, ವಾಸಃ ಜನತಾ ನಗರ, ಕುದೂರು, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ.

**ದಂಡ ಪ್ರಕ್ರಿಯಾ ಸಂಹಿತೆಯ ಕಲಂ 313 ರ ಅಡಿಯಲ್ಲಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1: | ಫಿರ್ಯಾದುದಾರರಾದ ವೇಣುಗೋಪಾಲ.ಬಿ. ರವರು ನಿಮ್ಮ ವಿರುದ್ಧ ಕೊಟ್ಟಿರುವ ಹೇಳಿಕೆಗಳನ್ನು ಕೇಳಿದ್ದೀರಾ? |
| ಉತ್ತರ: | ತಿಳಿದಿದೆ |
| ಪ್ರಶ್ನೆ 2: | ಪಿ.ಡಬ್ಲ್ಯೂ1 ವೇಣುಗೋಪಾಲ.ಬಿ. ರವರು ತಮ್ಮ ಸಾಕ್ಷ್ಯದಲ್ಲಿ, ನೀವು ಮತ್ತು ಅವರು ಹಲವಾರು ವರ್ಷಗಳಿಂದ ಒಬ್ಬರಿಗೊಬ್ಬರು ಪರಿಚಯಸ್ಥರು ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 2: | ಫಿರ್ಯಾದುದಾರರಾದ ವೇಣುಗೋಪಾಲ.ಬಿ. ರವರು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ನಿಮ್ಮ ಕಾನೂನುಬದ್ಧ ಅವಶ್ಯಕತೆಗಾಗಿ ಅಂದರೆ ಹಿಂದಿನ ಸಾಲವನ್ನು ತೀರಿಸಲು ಮತ್ತು ಗೃಹ ಕೃತ್ಯದ ಅವಶ್ಯಕತೆಗಾಗಿ ಅವರಿಂದ ರೂ.1,80,000/-ಗಳನ್ನು ಮೂರು ತಿಂಗಳ ಒಳಗೆ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |

| | |
|---|---|
| ಉತ್ತರ: | ಸುಳ್ಳು |
| ಪ್ರಶ್ನೆ 3: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಸಾಲದ ಮರುಪಾವತಿಗಾಗಿ ನೀವು 11.09.2023 ರ ದಿನಾಂಕ ನಮೂದಿಸಿದ ಹೆಚ್.ಡಿ.ಎಫ್.ಸಿ. ಬ್ಯಾಂಕ್, ಕರ್ತಿಗುಪ್ಪೆ ಮುಖ್ಯ ರಸ್ತೆ, 3ನೇ ಹಂತ, 3ನೇ ಸ್ಟೇಜ್, 4ನೇ ಬ್ಲಾಕ್, ಪುಡ್ ವರ್ಡ್ಲ್ ಎದುರು, ಬನಶಂಕರಿ, ಬೆಂಗಳೂರು – 560085 ಶಾಖೆಯ ಚೆಕ್ ನಂ.000004 ಅನ್ನು ರೂ.1,80,000/– ಗಳಿಗೆ ನೀಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 4: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಚೆಕ್ ಅನ್ನು ಅವರು ತಮ್ಮ ಬ್ಯಾಂಕ್ ಆದ ಸ್ಟೇಟ್ ಬ್ಯಾಂಕ್ ಇಂಡಿಯಾ, ಬೈಪಾಸ್ ರಸ್ತೆ, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "Drawers Signature Differs" ಎಂಬ ಕಾರಣಕ್ಕೆ ಸದರಿ ಚೆಕ್ ದಿನಾಂಕಃ 15.09.2023 ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಹೌದು |
| ಪ್ರಶ್ನೆ 5: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಈ ಬಗ್ಗೆ ದಿನಾಂಕ 20.09.2023 ರಂದು ಅವರು ನಿಮಗೆ ತಮ್ಮ ವಕೀಲರ ಮೂಲಕ ನೊಂದಾಯಿತ ಅಂಚೆಯ ಮೂಲಕ ನೋಟೀಸ್ ಅನ್ನು ನೀಡಿದ್ದು, ಸದರಿ ನೋಟೀಸು ನಿಮಗೆ ದಿನಾಂಕಃ 25.09.2023ರಂದು ಖುದ್ದಾಗಿ ಜಾರಿಯಾಗಿದ್ದರೂ ಸಹ ನೀವು ಫಿರ್ಯಾದುದಾರರಿಗೆ ನೀಡಬೇಕಾದ ಚೆಕ್ಕಿನ ಹಣವನ್ನು ಉದ್ದೇಶಪೂರ್ವಕವಾಗಿ ಮರುಪಾವತಿಸಿಲ್ಲ ಹಾಗು ನೋಟೀಸ್‌ಗೆ ಉತ್ತರವನ್ನು ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |

| | |
|---|---|
| ಉತ್ತರ: | ಹೌದು |
| ಪ್ರಶ್ನೆ 6: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆದರೂ ಸಹ ನೀವು ಈವರೆಗೂ ಸಾಲದ ಹಣವನ್ನು ಮರುಪಾವತಿಸದೆ ಇರುವುದರಿಂದ ನೆಗೋಶಿಯೇಬಲ್ ಇನ್ಸ್ಟ್ರುಮೆಂಟ್ಸ್ ಕಾಯಿದೆಯ ಕಲಂ 138ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 7: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ನೀವು ಅವರಿಗೆ ನೀಡಿದ ಚೆಕ್, ಬ್ಯಾಂಕಿನವರು ನೀಡಿದ ಹಿಂಬರಹ, ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿ, ಅಂಚೆ ರಶೀದಿ, ಅಂಚೆ ಸ್ವೀಕೃತಿ ಪತ್ರ ಮತ್ತು ದೂರನ್ನು ನಿಪಿ-1 ರಿಂದ ನಿಪಿ-6 ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 8: | ನಿಮಗೆ ಈ ಕೇಸಿನ ಬಗ್ಗೆ ಮತ್ತೆ ಏನಾದರೂ ಹೇಳುವುದು ಇದೆಯೇ? |
| ಉತ್ತರ: | ಇದೆ |
| ಪ್ರಶ್ನೆ 8 : | ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಇದೆಯೇ? |
| ಉತ್ತರ: | ಇದೆ |

ಈ ಮೇಲ್ಕಂಡ ಹೇಳಿಕೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಮತ್ತು ಸರಿಯಾಗಿದೆಯೆಂದು ದೃಢೀಕರಿಸಿರುತ್ತೇನೆ.

ದಿನಾಂಕಃ 13.10.2025. Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ